**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.**
**ಸಿ ಸಿ ನಂಃ899/2022**

| | | | |
|---|---|---|---|
| ಸಾಕ್ಷಿಯ ಹೆಸರು | ಃ ತನ್ವೀರ್ | ಸಿ.ಡಬ್ಲ್ಯು | 5 |
| ತಂದೆಯ ಹೆಸರು | ಃ ರಹೀಮ್ ವುಲ್ಲಾ | ಪಿ.ಡಬ್ಲ್ಯು | 2 |
| ವಯಸ್ಸು | ಃ 34 ವರ್ಷ | | |
| ಉದ್ಯೋಗ | ಃ ಕೂಲಿ | | |
| ವಾಸ ಸ್ಥಳ | ಃ ನಾಗೇನಹಳ್ಳಿ | | |

**ದಿನಾಂಕಃ 31-07-2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ಸಾಕ್ಷಿಗೆ ದಿನಾಂಕ 01-11-2021 ರ ಮಹಜರ ತೋರಿಸಲಾಗಿ ಅದರ ಮೇಲೆ ತನ್ನ ಸಹಿ ಇರುವುದಾಗಿ ಹೇಳುತ್ತಾರೆ ಅದನ್ನು ನಿಪಿ.1 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎರಡು ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಮಾಡಿದ್ದೇನೆ. ಯಾವ ಕಾರಣಕ್ಕೆ ಎಂದು ನನಗೆ ಗೊತ್ತಿಲ್ಲ. ನ್ಯಾಯಾಲಯ ಮುಂದೆ ಆರೋಪಿಯ ಪರಿಚಯ ಇದೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ದಾಳಿ ಮಾಡಿಲ್ಲ ಮತ್ತು ಆರೋಪಿಯಿಂದ ಯಾವುದೇ ವಸ್ತುಗಳನ್ನು ಅಮಾನತಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಹೇಳಿಕೆಯನ್ನು ಕೊಟ್ಟಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-**

ದಿನಾಂಕ 01-11-2021 ರಂದು ಬೆಳಗ್ಗೆ 6 ಗಂಟೆ ಸುಮಾರಿಗೆ ಪೊಲೀಸರು ನನ್ನನ್ನು ಕರೆದು ನಾಗೇನಹಳ್ಳಿ ಗ್ರಾಮದ ಸರ್ಕಾರಿ ಶಾಲೆ ಪಕ್ಕದ ಬಳಿ ಕರೆದುಕೊಂಡು ಹೋಗಿ ನನ್ನ ಸಮಕ್ಷಮ ಮದ್ಯೆ ಮಾರಾಟ ಮಾಡುತ್ತಿದ್ದ ಆರೋಪಿ ವಿರುದ್ಧ ದಾಳಿ ಮಾಡಿ ಆತನ ಕಡೆಯಿಂದ 90 ಎಂ ಎಲ್ ನ 96 ಟೆಟ್ರಾ ಪ್ಯಾಕೇಟುಗಳನ್ನು ಅಮಾನತ್ತ ಮಾಡಿಕೊಂಡಿದ್ದಾರೆ, ಮಹಜರ ಓದಿ ತಿಳಿಸಿ ಸ್ಥಳದಲ್ಲಿಯೇ ನನ್ನ ಸಹಿ ಪಡೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಹೇಳಿಕೆಯನ್ನು ನಿಪಿ.3 ಎಂದು ಗುರುತಿಸಲಾಯಿತು.

**ಮರುವಿಚಾರಣೆ :** ಇಲ್ಲಃ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

*ಓ ಹೇ ಕೇ ಸ ಇ ಎ ಓ*

Sd/-

*ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ*
*ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.*